# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಭಾರತಿ ಶೆಟ್ಟಿ ರವರು ನಿಯಮ 330ರಡಿ ಮಂಡಿಸಿರುವ ಸೂಚನೆಗೆ ಉತ್ತರ

**ಪ್ರಶ್ನೆ :**

**ರಾಜ್ಯದಲ್ಲಿ ಮಂಗಳಮುಖಿಯರು ಸಮಾಜದ ಮುಖ್ಯ ವಾಹಿನಿಯಲ್ಲಿ ಶೋಷಣೆಗಳಿಗೆ ಒಳಪಡುತ್ತಿರುವುದರಿಂದ ಅವರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು ಮತ್ತು ಸದರಿಯವರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಪ್ರತ್ಯೇಕ ನಿರ್ದೇಶನಾಲಯ ಹಾಗೂ ಗೃಹ ಇಲಾಖೆಯಲ್ಲಿ ಪ್ರತ್ಯೇಕ ಸೆಲ್‌ಅನ್ನು ಸ್ಥಾಪಿಸುವ ಬಗ್ಗೆ.**

**ಉತ್ತರ :**

- ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ (ಸಿವಿಲ್) 400/2012 ನ್ಯಾಷನಲ್ ಲೀಗಲ್ ಸರ್ವೀಸ್ v/s ಯೂನಿಯನ್ ಆಫ್ ಇಂಡಿಯಾ ಮತ್ತು ಇತರರು ಹಾಗೂ ರಿಟ್ ಅರ್ಜಿ ಸಂಖ್ಯೆ (ಸಿವಿಲ್) 604/2013ರ ಪ್ರಕರಣಕ್ಕೆ ಸಂಬಂಧಿಸಿದಂತೆ, ದಿನಾಂಕ:15.04.2014ರ ಆದೇಶದಲ್ಲಿ ಅಸ್ತಿತ್ವದಲ್ಲಿರುವ ಅವಳಿ ಲಿಂಗಿಗಳ (ಗಂಡು ಮತ್ತು ಹೆಣ್ಣು) ಜೊತೆಗೆ ಟ್ರಾನ್ಸ್ ಜೆಂಡರ್ ರವರನ್ನು ತೃತೀಯ ಲಿಂಗಿಗಳೆಂದು ಮಾನ್ಯತೆ ನೀಡಿದೆ.

- ಸರ್ಕಾರದ ಆದೇಶ ಸಂಖ್ಯೆ: ಮಮಇ 02 ಮಲಅನಿ 2018, ದಿನಾಂಕ:10.01.2018ರಲ್ಲಿ ಕರ್ನಾಟಕ ರಾಜ್ಯ ಟ್ರಾನ್ಸ್ ಜೆಂಡರ್ ನೀತಿ-2017ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲ ಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಒಟ್ಟು 19 ವಿವಿಧ ಇಲಾಖಾ ಅಧಿಕಾರಿಗಳನ್ನು ಒಳಗೊಂಡ ಕೋಶವನ್ನು ರಚಿಸಲಾಗಿರುತ್ತದೆ.

- ರಾಜ್ಯದಲ್ಲಿ "ಕರ್ನಾಟಕ ರಾಜ್ಯ ಟ್ರಾನ್ಸ್ ಜೆಂಡರ್ ನೀತಿ-2017"ರ ಅನ್ವಯ ಟ್ರಾನ್ಸ್ ಜೆಂಡರ್ ರವರ ಮೂಲ ಹಂತದ ಸಮೀಕ್ಷೆಯನ್ನು ರಾಜ್ಯದ 31 ಜಿಲ್ಲೆಗಳಲ್ಲಿ 15ನೇ ಸೆಪ್ಟೆಂಬರ್ 2025 ರಿಂದ 21ನೇ ನವೆಂಬರ್ 2025 ರವರೆಗೆ ಕೈಗೊಳ್ಳಲಾಗಿದ್ದು, ಸಮೀಕ್ಷೆಯಿಂದ ಒಟ್ಟಾರೆ 10,365 ಟ್ರಾನ್ಸ್ ಜೆಂಡರ್ ರವರು ಇರುವುದು ತಿಳಿದು ಬಂದಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ: ಮಮಇ 87 ಮಅನಿ 2018, ದಿನಾಂಕ: 29-01-2019ರಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಉಸ್ತುವಾರಿ ಸಮಿತಿ/ಕೋಶ, ತಾಲ್ಲೂಕು ಮಟ್ಟದ ಸಮಿತಿ ಮತ್ತು ಬೆಂಬಲ ಘಟಕವನ್ನು ರಚಿಸಿ ಸದರಿ ಸಮಿತಿ/ಕೋಶಗಳು ನಿರ್ವಹಿಸಬೇಕಾದ ಜವಾಬ್ದಾರಿಗಳನ್ನು ವಿವರವಾಗಿ ತಿಳಿಸಲಾಗಿದೆ.

- ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಛೇರಿಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ ಸಹಾಯವಾಣಿ ಸಂಖ್ಯೆ 1800 599 2025 ಅನ್ನು ಆರಂಭಿಸಲಾಗಿದ್ದು, ಕರೆಗಳನ್ನು ಸ್ವೀಕರಿಸಲು ಸಮುದಾಯದ ವ್ಯಕ್ತಿಯನ್ನು ನೇಮಕ ಮಾಡಲಾಗಿದೆ.

- ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 179 ಸೇನೆನಿ 2020, ದಿನಾಂಕ: 14-07-2021ರಲ್ಲಿ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9 ರನ್ವಯ ರಾಜ್ಯ ಸಿವಿಲ್ ಸೇವೆಗಳಿಗೆ ನೇರ ನೇಮಕಾತಿಯಲ್ಲಿ ಸಮತಳ ಶೇಕಡ 1 ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿದೆ.

- ಸರ್ಕಾರದ ಆದೇಶ ಸಂಖ್ಯೆ: WCD 104 KSW 2025, ದಿನಾಂಕ:-11-11-2025 ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು ಇವರನ್ನು ರಿಟ್ ಅರ್ಜಿ (ಸಿವಿಲ್) ಸಂಖ್ಯೆ:1405/2023ಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಚಿಸಿರುವ advisory committeeಗೆ ಮಾಹಿತಿ ನೀಡಲು ನೋಡಲ್ ಅಧಿಕಾರಿಯೆಂದು ನೇಮಕ ಮಾಡಲಾಗಿದೆ.

- ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿ ಕಾರ್ಯಕ್ರಮಗಳಲ್ಲಿ ಆರ್ಥಿಕ ಸೌಲಭ್ಯ ನೀಡಲಾಗುತ್ತಿದೆ.

- ರಾಜ್ಯದಲ್ಲಿನ Transgender Welfare Board ರಚಿಸಲು ಭಾರತ ಸರ್ಕಾರವು Model Transgender Welfare Board Composition for State / UTs ನೀಡಿದ್ದು, ಅದರಂತೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಸಮೀಕ್ಷೆಯನ್ನು ನಡೆಸಿ ವರದಿಯನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸಲ್ಲಿಸಿದ್ದು, ಪ್ರಸ್ತುತ ಪರಿಶೀಲನೆಯಲ್ಲಿರುತ್ತದೆ.

- ಮಂಗಳಮುಖಿಯರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು, ಇವರ ಮೇಲಿನ ಶೋಷಣೆ ತಪ್ಪಿಸಲು ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ರವರ ಕಛೇರಿಯ ಸುತ್ತೋಲೆ ಸಂಖ್ಯೆ: 55/ಜಿಸಿ/ಎನ್‌ಹೆಚ್‌ಆರ್‌ಸಿ/2024, ದಿನಾಂಕ: 09.09.2024 ರಲ್ಲಿ ಎ.ಡಿ.ಜಿ.ಪಿ (ಕಾನೂನು ಮತ್ತು ಸುವ್ಯವಸ್ಥೆ) ರವರನ್ನು Head of Transgender Protection Cell ಎಂದು ನಾಮನಿರ್ದೇಶನ ಮಾಡಿ ಅವರ ನಿರ್ದೇಶನದಲ್ಲಿ cell ತೆರೆಯಲಾಗಿರುತ್ತದೆ ಹಾಗೂ ಸಹಾಯಕ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ (ಸಾಮಾನ್ಯ) ರವರನ್ನು Transgender Protection Cell ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ .

- ಮುಂದುವರೆದು, ಸದರಿ ಸುತ್ತೋಲೆಯಲ್ಲಿ ಪೊಲೀಸ್ ಆಯುಕ್ತರು ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕರು ತಮ್ಮ ವ್ಯಾಪ್ತಿಯ ನಗರ/ಜಿಲ್ಲೆಯಲ್ಲಿ ತೃತೀಯ ಲಿಂಗಿಗಳ ರಕ್ಷಣೆಗಾಗಿ ಒಬ್ಬರು ನೋಡೆಲ್ ಅಧಿಕಾರಿಯನ್ನು ಹಾಗೂ ಜಿಲ್ಲೆಯ ಪ್ರತಿಯೊಂದು ಪೊಲೀಸ್ ಠಾಣೆಯಿಂದ ಒಬ್ಬ ಸಿಬ್ಬಂದಿಯನ್ನು Focal Point Officer ಆಗಿ ನೇಮಿಸುವಂತೆ ನಿರ್ದೇಶಿಸಲಾಗಿರುತ್ತದೆ. ಅದರಂತೆ, ಪ್ರತಿ ನಗರ/ಜಿಲ್ಲೆ ಹಾಗೂ ಪೊಲೀಸ್ ಠಾಣೆಗಳಲ್ಲಿ ತಲಾ ಒಬ್ಬರು ಅಧಿಕಾರಿಯನ್ನು ನೋಡೆಲ್ ಅಧಿಕಾರಿ ಹಾಗೂ Focal Point Officer ಆಗಿ ನೇಮಿಸಲಾಗಿರುತ್ತದೆ.

ಸಂಖ್ಯೆ: HD 3 SDN 2026

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು